ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 257 ಯುಜಿಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 04.11.2020

ಇವರಿಂದ:–
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ:–
ಕುಲಸಚಿವರು,
ಗುಲ್ಬರ್ಗ ವಿಶ್ವವಿದ್ಯಾಲಯ,
ಕಲಬುರಗಿ – 585 106.

ಮಾನ್ಯರೇ,

ವಿಷಯ: 2019–20ನೇ ಶೈಕ್ಷಣಿಕ ಸಾಲಿಗೆ ಬೀದರ್ ಜಿಲ್ಲೆ, ಭಾಲ್ಕಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಕೋರ್ಸುಗಳಿಗೆ ಶಾಶ್ವತ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂ: ಗುವಿಕ/ವಿಮವಿ/ಯುಜಿ/ಸಂಲಗ್ನತೆ/2019–20/1637, ದಿನಾಂಕ: 02–03–2020.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದ ಕಡೆಗೆ ಗಮನ ಸೆಳೆಯಲಾಗಿದೆ. ಬೀದರ್ ಜಿಲ್ಲೆ, ಭಾಲ್ಕಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಮತ್ತು ಬಿ.ಬಿ.ಎಂ., ಕೋರ್ಸುಗಳಿಗೆ 2019–20ನೇ ಶೈಕ್ಷಣಿಕ ಸಾಲಿನಿಂದ 2022–23ನೇ ಶೈಕ್ಷಣಿಕ ಸಾಲಿನವರೆಗೆ ಶಾಶ್ವತ ಸಂಯೋಜನೆಯನ್ನು ಮಂಜೂರು ಮಾಡುವ ಬಗ್ಗೆ ಉಲ್ಲೇಖಿತ ಪತ್ರದಲ್ಲಿ ಪ್ರಸ್ತಾಪಿಸಿರುವ ಹಿನ್ನೆಲೆಯಲ್ಲಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ 62ನೇ ಪ್ರಕರಣದ (1)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೀದರ್ ಜಿಲ್ಲೆ, ಭಾಲ್ಕಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಈ ಕೆಳಕಂಡ ಕೋರ್ಸುಗಳಿಗೆ ಅದರ ಮುಂದೆ ನಮೂದಿಸಿರುವ ಸಾಲುಗಳಿಗೆ ಅನ್ವಯವಾಗುವಂತೆ ಶಾಶ್ವತ ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ. | ಕೋರ್ಸು | ಭಾಷೆಗಳು | ಐಚ್ಛಿಕ ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ | ಶಾಶ್ವತ ಸಂಯೋಜನಾ ಅವಧಿ |
|---|---|---|---|---|---|
| 1 | ಬಿ.ಎ., | ಕನ್ನಡ, ಇಂಗ್ಲೀಷ್, ಹಿಂದಿ | ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ | 120 | 2019–20ನೇ ಸಾಲಿನಿಂದ 2022–23ನೇ ಸಾಲಿನವರೆಗೆ (ನಾಲ್ಕು ವರ್ಷಗಳವರೆಗೆ) |
| 2 | ಬಿ.ಕಾಂ., | | ವಿಶ್ವವಿದ್ಯಾಲಯದ ವಿನಿಯಮಾವಳಿಯಂತೆ | 60 | |
| 3 | ಬಿ.ಎಸ್ಸಿ., | | ಭೌತಶಾಸ್ತ್ರ, ಗಣಿತ, ಕಂಪ್ಯೂಟರ್ ಸೈನ್ಸ್ | 60 | |
| 4 | ಬಿ.ಬಿ.ಎಂ., | | ವಿಶ್ವವಿದ್ಯಾಲಯದ ವಿನಿಯಮಾವಳಿಯಂತೆ | 30 | |

Scanned by CamScanner

ಮೇಲ್ಕಂಡ ಶಾಶ್ವತ ಸಂಯೋಜನೆಯು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ

<u>ಷರತ್ತುಗಳು:-</u>

1. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
2. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.
3. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
4. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸುಗಳನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
6. ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರ ದಾಖಲೆಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ ಆರು ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
7. ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದ್ದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧನಾ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;
8. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
9. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು;
10. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
11. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(3)ರಲ್ಲಿನ ನಿಬಂಧನೆಗೊಳಪಟ್ಟಂತೆ ಹಾಗೂ ಸ್ಥಳೀಯ ವಿಚಾರಣಾ ಸಮಿತಿ ವರದಿಯ ಶಿಫಾರಸ್ಸಿನಲ್ಲಿ ಒಳಗೊಂಡಿರುವ ಷರತ್ತುಗಳನ್ನು ಕಡ್ಡಾಯವಾಗಿ ಈ ಶೈಕ್ಷಣಿಕ ಸಾಲಿನಲ್ಲಿಯೇ ಅನುಸರಿಸತಕ್ಕದ್ದು.
12. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(12)ರನ್ವಯ ಸೂಕ್ತ ಆದೇಶಗಳನ್ನು ವಿಶ್ವವಿದ್ಯಾಲಯದಿಂದ ಹೊರಡಿಸತಕ್ಕದ್ದು.

ತಮ್ಮ ನಂಬುಗೆಯ,

(ಶೀತಲ್ ಎಂ ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1)

04/11/2020

<u>ಪ್ರತಿ ಇವರಿಗೆ:</u>

1. ಆಯುಕ್ತರು/ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು - 560 001
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಕಲಬುರಗಿ
3. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭಾಲ್ಕಿ, ಬೀದರ್ ಜಿಲ್ಲೆ.

Scanned by CamScanner